ಉ) ಬಂದಿಲ್ಲ. ಸುಂಕ ವಸೂಲಾತಿಯನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದ ಮೇಲೆ ನೀಡಲಾಗಿದೆ.

ಊ) ಅವ್ಯವಹಾರಗಳಾವುವೂ ಇಲ್ಲದಿರುವುದರಿಂದ ತನಿಖೆ ನಡೆಸುವ ಪ್ರಶ್ನೆಯೇ ಉದ್ಭವಿಸುವುದಿಲ್ಲ.

ಹುಬ್ಬಳ್ಳಿ ಪ್ರವಾಸಿ ಮಂದಿರ ಹಾಗೂ ಸರ್ಕ್ಯೂಟ್ ಹೌಸ್ ಬಗ್ಗೆ

೧೪೦೪ (೧೪೬೬) ಶ್ರೀ ಪಿ. ಸಿ. ಸಿದ್ದನಗೌಡರ (ಕಲಘಟಗಿ):- ಮಾನ್ಯ ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಹುಬ್ಬಳ್ಳಿ ಪ್ರವಾಸಿ ಮಂದಿರ ಹಾಗೂ ಸರ್ಕ್ಯೂಟ್ ಹೌಸ್‌ನಲ್ಲಿರುವ ಕೊಠಡಿಗಳ ಸಂಖ್ಯೆ ಎಷ್ಟು?

ಆ) ಮುಖ್ಯ ಮಂತ್ರಿಗಳು ಹಾಗೂ ಮಂತ್ರಿಗಳು ಹುಬ್ಬಳ್ಳಿಗೆ ಬಂದಾಗ ಕೊಠಡಿಗಳು ಸಿಗದೆ ಧಾರವಾಡಕ್ಕೆ ಹೋಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ?

ಇ) ಹಾಗಿದ್ದಲ್ಲಿ ಹುಬ್ಬಳ್ಳಿಯ ಪ್ರವಾಸಿ ಮಂದಿರ ಹಾಗೂ ಸರ್ಕ್ಯೂಟ್ ಹೌಸ್‌ಗಳಲ್ಲಿ ಈಗಿರುವ ಕೊಠಡಿಗಳ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

ಶ್ರೀ ಜಿ. ಪರಮೇಶ್ವರ ನಾಯ್ಕ (ಲೋಕೋಪಯೋಗಿ ಮಂತ್ರಿಗಳು):-

ಅ) ಕೊಠಡಿಗಳ ಒಟ್ಟು ಸಂಖ್ಯೆ ೨೨.

೧) ಪ್ರವಾಸಿ ಮಂದಿರದಲ್ಲಿ ೮ ಕೋಣೆಗಳು

೨) ಸರ್ಕ್ಯೂಟ್‌ಹೌಸ್‌ನಲ್ಲಿ ೯ ಕೋಣೆಗಳು

೩) ನಿರೀಕ್ಷಣಾ ಮಂದಿರದಲ್ಲಿ ೫ ಕೋಣೆಗಳು

ಒಟ್ಟು ೨೨

ಆ) ಹೌದು. ಕೆಲವೇ ಸಂದರ್ಭದಲ್ಲಿ ಮಾತ್ರ ಕೊಠಡಿಗಳು ಲಭ್ಯವಿಲ್ಲದ ಕಾರಣ ಧಾರವಾಡಕ್ಕೆ ಹೋಗಿರುವುದು ಉಂಟು.

ಇ) ಹುಬ್ಬಳ್ಳಿ ಪ್ರವಾಸಿ ಮಂದಿರದಲ್ಲಿ ೨.೦೦ ಲಕ್ಷ ರೂ. ಗಳ ಅಂದಾಜಿನಲ್ಲಿ ಹೆಚ್ಚು ಕೊಠಡಿಗಳನ್ನು ನಿರ್ಮಿಸಲು ಹಾಗೂ ಹುಬ್ಬಳ್ಳಿ-ಧಾರವಾಡ ನಗರಗಳ ಮಧ್ಯೆ ರಾಯಾಪೂರದಲ್ಲಿ ೯ ಸಾಧಾರಣ ಕೊಠಡಿಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಗುಲ್ಬರ್ಗ ಜಿಲ್ಲೆಯ ಸೇಡಂ ತಾಲ್ಲೂಕಿನ ರಸ್ತೆ ಕಾಮಗಾರಿ ಕೆಲಸ

೧೪೦೫ (೧೪೬೭) ಶ್ರೀ ಬಸವಂತರೆಡ್ಡಿ ಪೋತಕಪಲ್ಲಿ (ಸೇಡಂ):- ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನ ಮಲಖೇಡದಿಂದ ಅಡಕಿ ಹುದಾವರೆಗೆ ಕಾರ್ಯ ನಿರ್ವಹಿಸುತ್ತಿದ್ದ ಗುತ್ತಿಗೆದಾರರು ಕೆಲಸವನ್ನು ಸ್ಥಗಿತಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಕಾಮಗಾರಿ ಸ್ಥಗಿತಗೊಳಿಸಲು ಕಾರಣವೇನು?

ಇ) ಈ ರಸ್ತೆ ಮೇಲೆ ದೊಡ್ಡ ದೊಡ್ಡ ಕೊರಕಲು ಬಿದ್ದು ಬಸ್ಸುಗಳಿಗೆ, ವಾಹನಗಳ ಸಂಚಾರಕ್ಕೆ ತೊಂದರೆಯಾಗುವುದನ್ನು ತಪ್ಪಿಸಲು, ಕಾಮಗಾರಿಯನ್ನು ಪ್ರಾರಂಭ ಮಾಡುವ ವ್ಯವಸ್ಥೆ ಮಾಡಲಾಗುವುದೇ?

ಈ) ರಸ್ತೆ ಸಂಪೂರ್ಣಗೊಳ್ಳುವುದು ಯಾವಾಗ?

ಶ್ರೀ ಜಿ. ಪೆಚ್ ಅಶ್ವತ್ಥ ರಡ್ಡಿ (ಲೋಕೋಪಯೋಗಿ ಸಚಿವರು):-

ಅ) ಈ ರಸ್ತೆಯ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಗುತ್ತಿಗೆದಾರರು ಬಹಳ ನಿಧಾನವಾಗಿ ಕಾಮಗಾರಿಯನ್ನು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಕಾಮಗಾರಿಯು ಸ್ಥಗಿತಗೊಂಡಿಲ್ಲ.

ಇ) ಕಾಮಗಾರಿಯನ್ನು ತೀವ್ರವಾಗಿ ಮಾಡುವಂತೆ ಗುತ್ತಿಗೆದಾರರಿಗೆ ನೋಟೀಸ್‌ಗಳನ್ನೂ ನೀಡಿದ್ದು, ಕಾಮಗಾರಿಗಳು ಸುಸೂತ್ರವಾಗಿ ನಡೆಯುವಂತೆ ಕ್ರಮ ತೆಗೆದುಕೊಳ್ಳಲಾಗುವುದು.

ಈ) ಕಾರ್ಯಕ್ರಮದಂತೆ ಈ ರಸ್ತೆಯ ಅಭಿವೃದ್ಧಿ ಕಾಮಗಾರಿಗಳು ನವೆಂಬರ್ ೯೩ಕ್ಕೆ ಪೂರ್ಣಗೊಳ್ಳುವುದು.

ಗುಲ್ಬರ್ಗಾ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಸಂಕನೂರು ಗ್ರಾಮದ ಕುಡಿಯುವ ನೀರಿನ ಸಮಸ್ಯೆ

೧೪೦೬ (೧೮೯೦) ಶ್ರೀ ಬಸವಂತರೆಡ್ಡಿ ಪೋತಕಪಲ್ಲಿ (ಸೇಡಂ):- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಹಾಗೂ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ಗುಲ್ಬರ್ಗಾ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಸಂಕನೂರು ಗ್ರಾಮವು ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಯೋಜನೆ ಅಡಿಯಲ್ಲಿ ಇಲ್ಲಿಯವರೆಗೆ ಖರ್ಚಾಗಿರುವ ಹಣವೆಷ್ಟು?

ಇ) ಹಣ ಖರ್ಚಾಗಿಯೂ ಕೆಲಸ ನಡೆಯದಿರುವುದು ನಿಜವೇ?

ಈ) ಈಗ ಯಾವ ಯೋಜನೆಯಲ್ಲಿ ಕೆಲಸ ತೆಗೆದುಕೊಳ್ಳಲಾಗಿದೆ?

ಉ) ಈ ಕೆಲಸ ಪ್ರಗತಿಯಲ್ಲಿ ಇದೆಯೇ?

ಊ) ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಹಾಗೂ ಕಂದಾಯ ಸಚಿವರು):-

ಅ) ಬಂದಿದೆ.

ಆ) ಈಗ ಕೈಗೊಂಡಿರುವ ಕೊಳವೆ ನೀರು ಪೂರೈಕೆ ಪುನರ್ರಚನಾ ಯೋಜನೆಯಡಿಯಲ್ಲಿ ಇಲ್ಲಿ